ಗದಗ ಜಿಲ್ಲೆಯನ್ನು ರಚಿಸುವ ಬಗ್ಗೆ

೨೫೬. ಶ್ರೀ ಕೆ. ಹೆಚ್. ಪಾಟೀಲ್ (ಗದಗ).—ಮಾನ್ಯ ಕಂದಾಯ ಹಾಗೂ ಯೋಜನಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಶ್ರೀ ವಾಸುದೇವರಾವ್ ಮತ್ತು ಶ್ರೀ ಹುಂಡೇಕರ್ ಸಮಿತಿಯವರು ಗದಗ್ ಜಿಲ್ಲೆಯನ್ನು ರಚಿಸುವ ಬಗ್ಗೆ ಸಲ್ಲಿಸಿರುವ ವರದಿಯ ಜಾರಿಯ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ ಹಾಗೂ ಯೋಜನಾ ಮಂತ್ರಿಗಳು).—

ಅ) ಈ ವರದಿಗಳು ಸರ್ಕಾರದ ಪರಿಗಣನೆಯಲ್ಲಿರುತ್ತದೆ ಹಾಗೂ ಅಂತಿಮ ತೀರ್ಮಾನವನ್ನು ಅತಿ ಶೀಘ್ರ ತೆಗೆದುಕೊಳ್ಳಲಾಗುತ್ತದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎ ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ ಲಿಖಿತ ಮೂಲಕ ನೀಡಲಾದ ಪ್ರಶ್ನೆಗಳ ಉತ್ತರ ಪಟ್ಟಿಯನ್ನು ಸಭೆಯ ಮುಂದಿಟ್ಟಿದ್ದೇನೆ.

ಅಧ್ಯಕ್ಷರು.—ಪಟ್ಟಿಯನ್ನು ಸಭೆಯ ಮುಂದಿಡಲಾಗಿದೆ.

ಭೂ ಸುಧಾರಣೆಯ ಕುರಿತು

೨೦೯. ಶ್ರೀ ಗೋಪಾಲ ಮುಕುಂದ ಕಾನಡೆ (ಸಿರ್ಸಿ).—ಮಾನ್ಯ ಕಂದಾಯ ಮತ್ತು ಯೋಜನಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಉತ್ತರ ಕನ್ನಡ ಜಿಲ್ಲಾ ಸಿರಸಿ ಸಿದ್ದಾಪುರ ತಾಲ್ಲೂಕು ಭೂ ಸುಧಾರಣೆ ಕಾನೂನಿನ ಅನ್ವಯ ಅಧಿಭೋಗದಾರ ಹಕ್ಕು ಪಡೆದ ರೈತರಿಂದ ಭೂ ಪರಿಹಾರ ಕಂತಿನ ಹಣ ವಸೂಲಾತಿಗೆ ಅಧಿಕಾರಿಗಳು ಜಪ್ತಿ ನೋಟೀಸನ್ನು ಜಾರಿಗೊಳಿಸಿ ರೈತರಿಗೆ ತೊಂದರೆ ಕೊಡುತ್ತಿರುವುದು ಸರ್ಕಾರದಪರ ಗಮನಕ್ಕೆ ಬಂದಿದೆಯೇ ?

ಶ್ರೀ ಎಸ್. ಆರ್. ಬೊಮ್ಮಾಯಿ (ಕಂದಾಯ ಹಾಗೂ ಯೋಜನಾ ಸಚಿವರು).—

ಅ) ಕಾನೂನಿನ ಪ್ರಕಾರ ಯಾರು ಯಾರು ಪ್ರೀಮಿಯಂ ಹಣ ಬಾಕಿ ಕೊಡಬೇಕೋ ಅಂತಹವರಿಗೆ, ಕಾನೂನಿನ ಪ್ರಕಾರ ನೋಟೀಸು ನೀಡಲಾಗಿದೆಯೇ ಹೊರತು, ಕಾನೂನು ಬಾಹಿರವಾಗಿ ರೈತರಿಗೆ ತೊಂದರೆ ನೀಡುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿಲ್ಲ.

ಹುಬ್ಬಳ್ಳಿಯ ಅರಣ್ಯ ಇಲಾಖೆಯಲ್ಲಿ ರೆವಿನ್ಯೂ ಇಲಾಖೆಗೆ ಬಿಡುಗಡೆಗೊಳಿಸಿದ ಜಮೀನಿನ ಕುರಿತು

೨೧೦. ಶ್ರೀ ಗೋಪಾಲ ಮುಕುಂದ ಕಾನಡೆ (ಸಿರ್ಸಿ).—ಮಾನ್ಯ ಕಂದಾಯ ಮತ್ತು ಯೋಜನಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹುಬ್ಬಳ್ಳಿಯ ಅರಣ್ಯ ಇಲಾಖೆಯಲ್ಲಿ ಕಂದಾಯ ಇಲಾಖೆಗೆ ಬಿಡುಗಡೆ ಮಾಡಿದ ಅರಣ್ಯ ಭೂಮಿಯ ವಿಸ್ತೀರ್ಣ ಎಷ್ಟು ? ಹಾಗೂ ಸದರಿ ಭೂಮಿಯನ್ನು ಜನರಿಗೆ ನಿವೇಶನಕ್ಕಾಗಿ ನೀಡಲಾಗಿದೆಯೇ ?